# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | (168) 82 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಎಂ.ನಾಗರಾಜು(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 08.12.2025 |
| **ಪ್ರಶ್ನೆ** | | **ಉತ್ತರ** |
| (ಅ) | ರಾಜ್ಯದಲಿ ವಿಶ್ವವಿದ್ಯಾಲಯಗಳು ಸಂಶೋಧನೆ, ಪಠ್ಯಕ್ರಮ, ಉದ್ಯೋಗಾವಕಾಶ ಮತ್ತು ಡಿಜಿಟಲ್ ಕಲಿಕೆಗಳನ್ನು ಸುಧಾರಿಸಿ ಎಲ್ಲಾ ಪ್ರದೇಶಗಳು ಮತ್ತು ಸಮುದಾಯಗಳಿಗೆ ತಲುಪವಂತೆ ಮಾಡಲು ಸರ್ಕಾರದಿಂದ ರೂಪಿಸಲಾದ ನೀತಿಗಳು ಯಾವುವು; | ರಾಜ್ಯದಲ್ಲಿ ವಿಶ್ವವಿದ್ಯಾಲಯಗಳು ಸಂಶೋಧನೆ, ಪಠ್ಯಕ್ರಮ, ಉದ್ಯೋಗಾವಕಾಶ ಮತ್ತು ಡಿಜಿಟಲ್ ಕಲಿಕೆಗಳನ್ನು ಸುಧಾರಿಸಿ ಎಲ್ಲಾ ಪ್ರದೇಶಗಳು ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ತಲುಪವಂತೆ ಮಾಡಲು ಸರ್ಕಾರವು ಈ ಕೆಳಕಂಡಂತೆ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿರುತ್ತದೆ; |
| (ಆ) | ಉನ್ನತ ಶಿಕ್ಷಣದಲ್ಲಿ ಸಮಾಜದ ಮುಖ್ಯ ವಾಹಿನಿಯಲ್ಲಿಲ್ಲದ ವರ್ಗಗಳ ದಾಖಲಾತಿ ಅಂತರವನ್ನು ಕಡಿಮೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು; | 1. ಭಾರತ ಸರ್ಕಾರದ ರೂಸಾ ಯೋಜನೆಯಡಿಯಲ್ಲಿ ಹೊಸದಾಗಿ 02 ವಸತಿ ಸಹಿತ ಮಾದರಿ ಕಾಲೇಜುಗಳನ್ನು ತೆರೆಯಲಾಗಿದೆ ಮತ್ತು 05 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ವಸತಿ ಸಹಿತ ಮಾದರಿ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿದೆ.<br><br>2. ರಾಜ್ಯದ SCP/TSP ಹಾಗೂ KKRDB ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಒಳಗೊಂಡಂತೆ ಹೊಸದಾಗಿ 09 ವಸತಿ ಸಹಿತ ಮಾದರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲಾಗಿದೆ.<br><br>3. RUSA ಮತ್ತು PMUSHA ಯೋಜನೆಯಡಿಯಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ಅಭಿವೃದ್ಧಿ ಅನುದಾನ ನೀಡಲಾಗಿದೆ.<br><br>4. KKRDB ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ವಿಶ್ವವಿದ್ಯಾಲಯಗಳನ್ನು ಉನ್ನತೀಕರಿಸಲು ಕ್ರಮಕೈಗೊಳ್ಳಲಾಗಿದೆ. |

| | | |
|---|---|---|
| | | 5. ಬೀದರ್, ತಳಕಲ್, ಗಂಗಾವತಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯಲಾಗಿದೆ.<br><br>6. ಕೌಶಲ್ಯ ಹಾಗೂ ಉದ್ಯೋಗಾಭಿವೃದ್ಧಿಗೆ ಒತ್ತು ನೀಡಿ ಪ್ರವೇಶಾತಿಯನ್ನು ಹೆಚ್ಚಿಸುವ ಸಲುವಾಗಿ AEDP (Apprenticeship Embedded Degree Programme ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ.<br><br>7. ಕಲಿಕೆ ಜೊತೆ ಕೌಶಲ್ಯಾಧಾರಿತ ಕೋರ್ಸ್‌ಗಳನ್ನು KSDC ಸಹಯೋಗದಲ್ಲಿ ಪ್ರಾರಂಭಿಸಲಾಗಿದೆ.<br><br>8. ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ರಾಜ್ಯ ಸರ್ಕಾರದ ನೀತಿಯಂತೆ ರಾಜ್ಯದಲ್ಲಿ ಕಲಿಕೆ ಮತ್ತು ಕೌಶಲ್ಯ, ಕಲಿಕೆ ಜೊತೆ ಕೌಶಲ್ಯ, ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ, ಅಮೃತ ಮುನ್ನಡೆ ಹಾಗೂ Karnataka German Multi Skills Development Centre (KGMSD) ಅಡಿಯಲ್ಲಿ ಬೆಂಗಳೂರು, ಕಲಬುರಗಿ, ಬೆಳಗಾವಿ, ಮಂಗಳೂರು, ಹುಬ್ಬಳ್ಳಿ, ಮೈಸೂರು, ಗೌರಿಬಿದನೂರು, ಕಾರ್ಕಳ ಇಲ್ಲಿ ಕಲಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ.<br><br>9. ರಾಜ್ಯದಲ್ಲಿ ಉದ್ಯೋಗಾಧಾರಿತ ಮಾರುಕಟ್ಟೆಯ ಬೇಡಿಕೆಗೆ ಅನುಗುಣವಾಗಿ 226 ಸರ್ಕಾರಿ ಕಾಲೇಜುಗಳಲ್ಲಿ ಹೊಸ ಕೋರ್ಸ್ ಮತ್ತು ಕಾಂಬಿನೇಷನ್‌ಗಳನ್ನು ತೆರೆಯಲಾಗಿದೆ ಹಾಗೂ 15 ವಿವಿಧ ಉದ್ಯೋಗಾಧಾರಿತ ಕೋರ್ಸ್‌ಗಳನ್ನು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ತೆರೆಯಲಾಗಿದೆ.<br><br>10. ಉದ್ಯೋಗ ಮತ್ತು ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಲು ಅಜೀಂ ಪ್ರೇಮ್‌ಜೀ, ಎಚ್‌ಪಿ, ಟೊಯೊಟೊ ಮುಂತಾದ ಕೈಗಾರಿಕೋದ್ಯಮಗಳೊಂದಿಗೆ MoU ಮೂಲಕ ಒಡಂಬಡಿಕೆ ಮಾಡಿಕೊಂಡು ಶಿಕ್ಷಣವನ್ನು ನೀಡಲಾಗುತ್ತಿದೆ.<br><br>11. ಉದ್ಯೋಗ ಸೃಷ್ಟಿಸುವಂತಹ ಬಿಸಿಎ ಮತ್ತು ಬಿಬಿಎ ಕೋರ್ಸ್‌ಗಳನ್ನು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿದೆ.<br><br>12. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ಪದವಿ ಕೋರ್ಸ್‌ಗಳಿಗೆ |

| | | |
|---|---|---|
| | | ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಪ್ರವೇಶಾತಿಯನ್ನು ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಯುಎನ್ಇ 2020, ದಿನಾಂಕ: 29.10.2020ರನ್ವಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>13. ಹೆಣ್ಣು ಮಕ್ಕಳನ್ನು ಉನ್ನತ ಶಿಕ್ಷಣದಲ್ಲಿ ಉತ್ತೇಜಿಸಲು ಸರ್ಕಾರಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಶುಲ್ಕ ಮರು ಪಾವತಿ ಯೋಜನೆ ಜಾರಿಯಲ್ಲಿರುತ್ತದೆ.<br><br>14. ಸಮಾಜ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ:ಸಕಇ 83 ಪಕವಿ 2013, ದಿನಾಂಕ: 27.06.2013ರಲ್ಲಿ ರಾಜ್ಯ ವಿಶ್ವವಿದ್ಯಾಲಯಗಳಲ್ಲಿ / ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ / ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ ಆದೇಶವನ್ನು ಹೊರಡಿಸಲಾಗಿರುತ್ತದೆ.<br><br>15. ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಹಾಗೂ ಪ್ರಯೋಗಾಲಯ ಶುಲ್ಕದಿಂದ ವಿನಾಯಿತಿ ನೀಡಲಾಗಿರುತ್ತದೆ.<br><br>16. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ: ಹಿಂವಇ 397 ಬಿಎಂಎಸ್ 2013, ದಿನಾಂಕ: 05.09.2013ರನ್ವಯ ಹಿಂದುಳಿದ ವರ್ಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸುವ ಹಿತದೃಷ್ಟಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಯೋಜನೆ / ಕಾರ್ಯಕ್ರಮಗಳಿಗೆ ಆದಾಯ ಮಿತಿಯನ್ನು ಪರಿಷ್ಕರಿಸಿರುತ್ತದೆ.<br><br>17. ಸರ್ಕಾರಿ ಪ್ರಥಮ ದರ್ಜೆಯ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪದವಿ ನಂತರದ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡುತ್ತಿದ್ದು ಉದ್ಯೋಗ ಮೇಳಗಳ ಆಯೋಜನೆ, ಕೌಶಲ್ಯ ತರಬೇತಿ, ಗ್ರಂಥಾಲಯ ಸೌಲಭ್ಯ, ಪ್ರಯೋಗಾಲಯ ಸೌಲಭ್ಯ, smart class, |

| | | |
|---|---|---|
| | | N.C.C./N.S.S,ಕ್ರೀಡಾ ಚಟುವಟಿಕೆಗಳಿಗೆ ತರಬೇತಿ ನೀಡಲಾಗುತ್ತದೆ.<br><br>18. ಆರ್ಥಿಕವಾಗಿ ಹಿಂದುಳಿದ ಕುಟುಂಬದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಪ್ರೋತ್ಸಾಹಕ್ಕಾಗಿ ರಾಜೀವ್ ಗಾಂಧಿ ಸಾಲ ರೂಪದ ವಿದ್ಯಾರ್ಥಿ ವೇತನ ಯೋಜನೆಯಡಿ ವಿದ್ಯಾರ್ಥಿಗಳು ಬ್ಯಾಂಕುಗಳಲ್ಲಿ ಪಡೆಯುವ ಸಾಲಕ್ಕೆ ಶೈಕ್ಷಣಿಕ ಅವಧಿಗೆ ಇಲಾಖೆಯಿಂದ ಬ್ಯಾಂಕುಗಳಿಗೆ ಬಡ್ಡಿ ಸಬ್ಸಿಡಿ ನೀಡಲಾಗುತ್ತಿದೆ.<br><br>19. ಇಲಾಖಾ ವ್ಯಾಪ್ತಿಯಡಿ ಬರುವ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಿಗೆ (ಅನುದಾನಿತ ಕೋರ್ಸುಗಳಿಗೆ ಮಾತ್ರ) ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುವ ಆರ್ಥಿಕವಾಗಿ ಹಿಂದುಳಿದ ಕುಟುಂಬದಿಂದ ಬಂದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಪ್ರೋತ್ಸಾಹಕ್ಕಾಗಿ ರಾಜ್ಯ ಸರ್ಕಾರವು ರಾಜೀವ್ ಗಾಂಧಿ ಸಾಲ ರೂಪದ ವಿದ್ಯಾರ್ಥಿ ವೇತನದ ಬಡ್ಡಿ ಸಬ್ಸಿಡಿ ಯೋಜನೆಯನ್ನು ಜಾರಿಗೆ ತರಲಾಗಿದೆ.<br><br>20. ವಿದ್ಯಾರ್ಥಿಗಳು ಯಾವುದೇ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಶೈಕ್ಷಣಿ ಸಾಲ ಪಡೆದಿದ್ದಲ್ಲಿ ಸದರಿ ವಿದ್ಯಾರ್ಥಿಗಳು ಪಾವತಿಸಬೇಕಾದ ಬಡ್ಡಿ ಮೊತ್ತವನ್ನು ಇಲಾಖೆಯಿಂದ ಬ್ಯಾಂಕುಗಳಿಗೆ ಪಾವತಿಸಲಾಗುವುದು.<br><br>21. ದ್ವಿತೀಯ ಪಿ.ಯು.ಸಿ. ಉತ್ತೀರ್ಣಗೊಂಡು ವಿವಿಧ ಪದವಿ ತರಗತಿಗೆ ಪ್ರವೇಶ ಪಡೆಯುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಚಿ ಹೊನ್ನಮ್ಮ ಮತ್ತು ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನದ ಮಂಜೂರಾತಿ ಯೋಜನೆಯು ಜಾರಿಯಲ್ಲಿರುತ್ತದೆ.<br><br>22. ಹೆಣ್ಣು ಮಕ್ಕಳ ಪ್ರವೇಶಾತಿಯನ್ನು ಉತ್ತೇಜಿಸಲು ವಿದ್ಯಾರ್ಥಿ ವೇತನ, ಉಚಿತ ಶುಲ್ಕದ ಜೊತೆಗೆ ವಾರ್ಷಿಕ ರೂ. 30,000/- ಗಳನ್ನು ರಾಜ್ಯದ 37500 ವಿದ್ಯಾರ್ಥಿನಿಯರಿಗೆ ಅಜೀಂ ಪ್ರೇಂಜಿ ಫೌಂಡೇಷನ್ ಒಡಗೂಡಿ "ದೀಪಿಕ" ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br><br>23. ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಯುಎನ್‌ಇ 2009, ದಿನಾಂಕ: 04.06.2009ರಲ್ಲಿ ಯಾವುದೇ ಒಬ್ಬ ವಿದ್ಯಾರ್ಥಿಯು ಪ್ರವೇಶಾತಿ ಕೋರಿ ಬಂದಲ್ಲಿ ಆತನಿಗೆ / ಆಕೆಗೆ ಪ್ರವೇಶಾತಿಯನ್ನು |

| | | |
|---|---|---|
| | | ನಿರಾಕರಿಸುವಂತಿಲ್ಲವೆಂದು ಆದೇಶ ಹೊರಡಿಸಲಾಗಿದ್ದು, ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೂ ಪ್ರವೇಶಾತಿಯನ್ನು ನೀಡಲಾಗುತ್ತಿದೆ. |
| (ಇ) | ರಾಜ್ಯ ಹಾಗೂ ಕೇಂದ್ರ ಶಿಕ್ಷಣ ನೀತಿ ಶಿಫಾರಸ್ಸುಗಳಿಗೆ ಪ್ರತಿಕ್ರಿಯೆಯಾಗಿ ಸಂಶೋಧನಾ ಸಾಮರ್ಥ್ಯವನ್ನು ಖಚಿತಪಡಿಸಿಕೊಳ್ಳಲು ಮತ್ತು ಶಿಕ್ಷಕರ ಸ್ವಾಯತ್ತತೆ ಹಾಗೂ ವೃತ್ತಿಪರತೆಯನ್ನು ವೃದ್ಧಿಸುವಂತಹ ಪೂರಕ ವಾತಾವರಣವನ್ನು ನಿರ್ಮಿಸಲು ತನ್ನ ಸಿಬ್ಬಂದಿಗಳಲ್ಲಿನ ಕೌಶಲ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕರಿಗೆ ಶೈಕ್ಷಣಿಕ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಲು ಈ ಕೆಳಕಂಡ ಸಂಸ್ಥೆಗಳಿಂದ ತರಬೇತಿಗಳನ್ನು ನೀಡಲಾಗುತ್ತಿದೆ.<br>1. ಮೈಸೂರು ಆಡಳಿತ ತರಬೇತಿ ಸಂಸ್ಥೆ<br>2. ಜೀವನ ಕೌಶಲ್ಯ ತರಬೇತಿ (ನಿಮ್ಹಾನ್ಸ್)<br>3. ಅಜೀಂ ಪ್ರೇಂಜಿ ಫೌಂಡೇಷನ್<br>4. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ<br>ಮುಂದುವರೆದು, ರಾಜ್ಯದ ಅಸ್ಮಿತೆಯನ್ನು ಎತ್ತಿ ಹಿಡಿಯುವ, ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಿ ಯುವಜನರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸಬಲಗೊಳಿಸಲು ಒತ್ತು ನೀಡುವ ನಿಟ್ಟಿನಲ್ಲಿ ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತಾವಾಂಶಗಳನ್ನು ಒಳಗೊಂಡ ಹೊಸ ಶಿಕ್ಷಣ ನೀತಿಯನ್ನು ರೂಪಿಸುವ ಸಲುವಾಗಿ ಸರ್ಕಾರದಿಂದ ರಚಿಸಲಾದ ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ರಚಿಸಲಾಗಿರುತ್ತದೆ. |
| (ಈ) | ರಾಷ್ಟ್ರೀಯ ಶಿಕ್ಷಣ ನೀತಿ(ಎನ್.ಇ.ಪಿ) 2020 ಕ್ಕೆ ಹೋಲಿಸಿದಾಗ ಹೊಸ ರಾಜ್ಯ ಶಿಕ್ಷಣ ನೀತಿ (ಎಸ್.ಇ.ಪಿ) ಯು ಸಾರ್ವಜನಿಕ ವಿಶ್ವವಿದ್ಯಾಲಯಗಳ ರಚನೆ ಆಡಳಿತ ಮತ್ತು ಉತ್ತರದಾಯಿತ್ವಗಳನ್ನು ಹೇಗೆ ಮಾರ್ಪಡಿಸುತ್ತದೆ? | ಹೊಸ ರಾಜ್ಯ ಶಿಕ್ಷಣ ನೀತಿಗೆ ಸಂಬಂಧಿಸಿದಂತೆ ರಾಜ್ಯ ಶಿಕ್ಷಣ ನೀತಿ ಆಯೋಗವು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಉನ್ನತ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ ವರದಿಯನ್ನು ಪಡೆಯುವ ಸಲುವಾಗಿ ತಜ್ಞರ ಸಮಿತಿಯನ್ನು (Expert Committee) ರಚಿಸಲಾಗಿರುತ್ತದೆ. ಸದರಿ ತಜ್ಞರ ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಇಡಿ 357 ಯುಎನ್‌ಇ 2025**

(ಡಾ: ಎಂ.ಸಿ. ಸುಧಾಕರ್)
**ಉನ್ನತ ಶಿಕ್ಷಣ ಸಚಿವರು**